ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:21-05-2022ರಂದು ಸಿ.ವಿ.ರಾಮನ್‌ನಗರ ಉಪ ವಿಭಾಗ,

ವಾರ್ಡ್ ಸಂಖ್ಯೆ:50, ಬೆನ್ನಿಗಾನಹಳ್ಳಿ ವಾರ್ಡ್ ಸಮಿತಿ ಸಭೆಯ ನಡಾವಳಿಗಳು

ದಿನಾಂಕ:21-05-2022ರಂದು ಬೆಳಗ್ಗೆ 11.30.00 ಗಂಟೆಗೆ ವಾರ್ಡ್-50 ಬೆನ್ನಿಗಾನಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಶ್ರೀ.ರಾಮಾಂಜನೇಯ, ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ದಕ್ಷಿಣ) ಹಾಗೂ ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ವಾರ್ಡ್ ಸಂಖ್ಯೆ:50, ಬೆನ್ನಿಗಾನಹಳ್ಳಿ ವಾರ್ಡ್ ಕಛೇರಿ, 2ನೇ ಮುಖ್ಯರಸ್ತೆ, ಕಸ್ತೂರಿನಗರ ಬೆಂಗಳೂರು-560043 ಇಲ್ಲಿ ಹಮ್ಮಿಕೊಳ್ಳಲಾಯಿತು. ಸದರಿ ಸಭೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತೆ ಇರುತ್ತದೆ.

ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು ಹಾಗೂ ಆರ್.ಡಬ್ಲ್ಯೂ.ಎ

1. ಶ್ರೀ.ರಮೇಶ್ ಸದಸ್ಯರು
2. ಶ್ರೀ.ನಂಜೇಗೌಡ ಸದಸ್ಯರು
3. ಶ್ರೀ.ಆನಂದ್ ಸದಸ್ಯರು
4. ಶ್ರೀ.ನಾಗರಾಜ್ ಸದಸ್ಯರು
5. ಶ್ರೀ.ವಿ.ಎಂ.ರಾಜಣ್ಣ ಸದಸ್ಯರು
6. ಶ್ರೀ.ರಮಾನಥ್ ರಾವ್ ಆರ್.ಡಬ್ಲ್ಯೂ.ಎ
7. ಶ್ರೀ.ಮುನಿಕೃಷ್ಣ ಸದಸ್ಯರು
8. ಶ್ರೀ.ವೆಂಕಟೇಶ್ ಸದಸ್ಯರು
9. ಶ್ರೀ.ವೇಣುಗೋಪಾಲ್ ಸದಸ್ಯರು

ಸಭೆಯಲ್ಲಿ ಹಾಜರಿದ್ದ ವಾರ್ಡ್ ಮಟ್ಟದ ಅಧಿಕಾರಿ/ನೌಕರರು

1. ಶ್ರೀ.ರಾಮಾಂಜನೇಯ, ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ದಕ್ಷಿಣ) ಹಾಗೂ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ:50, ಬೆನ್ನಿಗಾನಹಳ್ಳಿ
2. ಶ್ರೀ.ನರಸಿಂಹಯ್ಯ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ ವಾರ್ಡ್ ಸಂಖ್ಯೆ:50, ಬೆನ್ನಿಗಾನಹಳ್ಳಿ
3. ಶ್ರೀ.ಸಂತೋಷ್ ಕೆಲಸ ಪರಿವೀಕ್ಷಕರು ಬೆಸ್ಕಾಂ
4. ಶ್ರೀಮತಿ.ಎಸ್.ತಿಲಗ ಕಿರಿಯ ಅಭಿಯಂತರರು, ಬೆಸ್ಕಾಂ
5. ಶ್ರೀ.ಪ್ರಭುದಾಸ್, ಕಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ.ಹರಿಕೃಷ್ಣ.ಎಸ್.ಕೆ ವಾರ್ಡ್ ಮಾರ್ಷಲ್
7. ಶ್ರೀ.ಕುಮಾರ್, ಕಂದಾಯ ವಸೂಲಿಗಾರರು. ವಾರ್ಡ್ ಸಂಖ್ಯೆ:50
8. ಶ್ರೀ.ಲೋಕೇಶ್ ಬಾಬು ಕಂದಾಯ ಪರಿವೀಕ್ಷಕರು ವಾರ್ಡ್ ಸಂಖ್ಯೆ:50

ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರಿಗೆ, ಸದಸ್ಯರಿಗೆ ಹಾಗೂ ವಿವಿಧ ಇಲಾಖೆಯ ಅಧಿಕಾರಿ/ನೌಕರರುಗಳಿಗೆ ಹಾಗೂ ಸಾರ್ವಜನಿಕರಿಗೆ ಸ್ವಾಗತ ಕೋರಿದರು. ಹಾಗೂ ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿರುವ ವಿಷಯಗಳ ಬಗ್ಗೆ ಹಾಗೂ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಸಭೆಯಲ್ಲಿ ಮಂಡಿಸಲು ಮಾನ್ಯ ಅಧ್ಯಕ್ಷರು ತಿಳಿಸಿ, ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯಲ್ಲಿ ಚರ್ಚಿಸಿದ ವಿಷಯಗಳು:-

| ಕ್ರ. ಸಂ | ಮಾಹಿತಿ | ಕ್ರಮ ವಹಿಸಬೇಕಾಗಿರುವ ಅಧಿಕಾರಿ |
|---|---|---|
| | ಘನತ್ಯಾಜ್ಯ ನಿರ್ವಹಣೆ (SWM) | |
| 1 | ಹೊರ ವರ್ತುಲ ರಸ್ತೆಯ ಜಂಕ್ಷನ್ ಮತ್ತು 3ನೇ ಅಡ್ಡರಸ್ತೆ, ಕಸ್ತೂರಿನಗರದಲ್ಲಿ ಕಸ ಸಂಗ್ರಹಣೆ ಸ್ಥಳದಲ್ಲಿ ಇರುವ ಡಸ್ಟ್ ಬಿನ್‌ಗಳನ್ನು ತೆಗೆಯಲು ಸೂಚಿಸಲಾಯಿತು. | Junior/Senior Health Inspector |
| | ಕಾಮಗಾರಿ ಇಲಾಖೆ (Engineering) | |

| | | |
|---|---|---|
| 1 | • ಶ್ರೀ.ಮುನಿಕೃಷ್ಣ ಸದಸ್ಯರು ಪಿಲ್ಲಾರೆಡ್ಡಿನಗರದಲ್ಲಿ ಇರುವ ಚರಂಡಿಗಳಲ್ಲಿ ಹೂಳನ್ನು ತೆಗೆಯಲು ಕೋರಿದರು.<br>• ಶ್ರೀ.ವೇಣುಗೋಪಾಲ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲು ಕೋರಿದರು.<br>• ಮುಂದುವರೆದು ಸದರಿಯವರು ಕಸ್ತೂರಿನಗರ 2ನೇ ಮುಖ್ಯರಸ್ತೆ ಹಾಗೂ ಇತರೆ ಪ್ರದೇಶಗಳಲ್ಲಿ ಬೀದಿ ಬದಿ ಅಂಗಡಿಗಳನ್ನು ತೆರವುಗೊಳಸಲು ಕೋರಿದರು. | Assistant Engineer-BBMP |
| | ಬೆಂಗಳೂರು ಜಲ ಮಂಡಳಿ (BWSSB) | |
| 1 | ಶ್ರೀ.ವೆಂಕಟೇಶ್ ರವರು ಬಿ.ಚನ್ನಸಂದ್ರದಲ್ಲಿ ಕುಡಿಯುವ ನೀರಿನ ಸರಬರಾಜು ಸಮರ್ಪಕವಾಗಿರುವುದಿಲ್ಲ ಎಂದು ದೂರಲಾಯಿತು. | Assistant Engineer-BWSSB |
| | ಬೀದಿ ದೀಪಗಳು (STREET LIGHTS) | |
| 1 | ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಸಭೆಯಲ್ಲಿ ದೂರು ನೀಡಲಾಯಿತು. ಇದಕ್ಕೆ ಗುತ್ತಿಗೆದಾರರ ಪರವಾಗಿ ಶ್ರೀ.ಸಂತೋಷ್‌ರವರು ದುರಸ್ಥಿಯಲ್ಲಿರುವ ಬೀದಿ ದೀಪಗಳನ್ನು ಸರಿಪಡಿಸಲಾಗುವುದ ಎಂದು ತಿಳಿಸಿದರು. | ಸಹಾಯಕ ಅಭಿಯಂತರರು ಬೆಸ್ಕಾಂ |
| | ತೋಟಗಾರಿಕಾ ಇಲಾಖೆ | |
| 1 | ವಾರ್ಡ್ ವ್ಯಾಪ್ತಿಯಲ್ಲಿ ಪಾರ್ಕ್‌ಗಳ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸುತತಿರುವುದಿಲ್ಲ. ಅದನ್ನು ನಿರ್ವಹಿಸಲು ಸೂಚಿಸಲಾಯಿತು.<br>ಮತ್ತು ಪಾರ್ಕ್‌ಗಳಲ್ಲಿ ದೀಪಗಳು ಕಾರ್ಯನಿರ್ವಹಿಸುತಿಲ್ಲ ಇದರ ಬಗ್ಗೆ ಕ್ರಮ ಕೈಗೊಳ್ಳಲು ಕೋರಿದರು. | ತೋಟಗಾರಿಕಾ ಅಧೀಕ್ಷಕರು |
| | ಅರಣ್ಯ ಇಲಾಖೆ | |
| 1 | ಸದಾನಂದನಗರ 2ನೇ ಅಡ್ಡರಸ್ತೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಒಣಗಿರುವ ಹಾಗೂ ಬೀಳುವ ಹಂತದಲ್ಲಿರುವ ಮರಗಳನ್ನು ತೆರವುಗೊಳಸಲು ಶ್ರೀ.ರಾಜಣ್ಣ ಸದಸ್ಯರು ಕೋರಿದರು.<br>ಅದರಂತೆ ಸಂಬಂಧಪಟ್ಟವರಿಗೆ ಪತ್ರ ಬರೆಯಲಾಗಿರುತ್ತದೆ. | ವಲಯ ಅರಣ್ಯಾ ಅಧಿಕಾರಿಗಳು |
| | ಬೃಹತ್ ನೀರುಗಾಲುವೆ (SWD Dept) | |
| 1 | ಕೃಷ್ಣಯ್ಯನಪಾಳ್ಯದಲ್ಲಿ ಮಳೆ ನೀರು ಸರಾಗವಾಗಿ ಹೋಗದೆ ರಸ್ತೆಯ ಮೇಲೆ ನಿಲ್ಲುತ್ತಿರುವುದರಿಂದ ಬೃಹತ್ ನೀರುಗಾಲುವೆಯ ಹೂಳು ತೆಗೆದು ಮತ್ತು ರೈಲ್ವೇ ಸೇತುವೆ ಕೆಳಭಾಗದ ಹೂಳು ತೆಗೆದು ನೀರು ಸರಾಗವಾಗಿ ಹೋಗುವಂತೆ ಕ್ರಮ ವಹಿಸಬೇಕೆಂದು ಸ್ಥಳೀಯ ಸದಸ್ಯರು ಕೋರಿದರು.<br><br>ಅದರಂತೆ ಬೃಹತ್ ನೀರುಗಾಲುವೆ ವಿಭಾಗರವರಿಗೆ ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ಪತ್ರ ಬರೆಯಲಾಗಿರುತ್ತದೆ. | ಸಹಾಯಕ ಅಭಿಯಂತರರು ಬೃಹತ್ ನೀರುಗಾಲುವೆ |
| | ಸಂಚಾರ ಪೋಲೀಸ್ ಇಲಾಖೆ TRAFIC POLICE DEPARTMENT | |
| 1 | • ಕಸ್ತೂರಿನಗರ 2ನೇ 'ಎ' ಮುಖ್ಯರಸ್ತೆ, ನ್ಯೂ ಹರಿಜನ್ ಕಾಲೇಜು ಮತ್ತು ಓ.ಎಂ.ಬಿ.ಆರ್ ಲೇಔಟ್‌ನಲ್ಲಿರುವ ಸಿ.ಎಂ.ಆರ್ ಕಾಲೇಜು ಬಳಿ ಅನಧಿಕೃತವಾಗಿ ವಾಹನಗಳನ್ನು ನಿಲ್ಲಿಸುತ್ತಿರುವುದನ್ನು ತಡೆಗಟ್ಟಲು ಹಾಗೂ ಸಂಚಾರ ದಟ್ಟಣೆಯನ್ನು ತಡೆಗಟ್ಟಲು ಸೂಚಿಸಲಾಯಿತು. | |
| | ಪೋಲೀಸ್ ಇಲಾಖೆ (ಕಾ ಮತ್ತು ಸು) | |
| 1 | ವಾರ್ಡ್ ವ್ಯಾಪ್ತಿಯಲ್ಲಿ ಕಾಲೇಜುಗಳ ಸುತ್ತ-ಮುತ್ತ ಗಸ್ತು ನಡೆಸಲು ಕ್ರಮ ವಹಿಸಲು ಕೋರಿರುತ್ತಾರೆ. | Police Departmrnt |

ಪ್ರಸ್ತುತ ಸಭೆಗೆ ಗೈರು ಹಾಜರಾಗಿರುವವರ ವಿರುದ್ಧ ನೋಟೀಸು ಜಾರಿ ಮಾಡಿ, ಮುಂದಿನ ಸಭೆಗೆ ಕಡ್ಡಾಯವಾಗಿ ನಿಗಧಿತ ಸಮಯದೊಳಗೆ ಹಾಜರಿರಲು ಹಾಗೂ ಮುಂದಿನ ಸಭೆಯ ಒಳಗಾಗಿ

೩

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ವಹಿಸಿ, ವಾರ್ಡ್ ಸಮಿತಿ ಕಾರ್ಯದರ್ಶಿರವರಿಗೆ ಅನುಪಾಲನಾ ವರದಿಯನ್ನು ಸಲ್ಲಿಸಲು ತಿಳಿಸಿ ಕಾರ್ಯದರ್ಶಿಗಳು ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು

ಶ್ರೀ.ನರಸಿಂಹಯ್ಯ.ಎನ್
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ೫೦ ಬೆನ್ನಿಗಾನಹಳ್ಳಿ

ಅಧ್ಯಕ್ಷರು

ಶ್ರೀ.ರಾಮಾಂಜನೇಯ,
ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ದಕ್ಷಿಣ)
ಮತ್ತು ನೋಡೆಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ೫೦ ಬೆನ್ನಿಗಾನಹಳ್ಳಿ

ಪ್ರತಿಯನ್ನು:-

1. ಶ್ರೀ.ರಾಮಾಂಜನೇಯ, ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ದಕ್ಷಿಣ)ಹಾಗೂ ನೋಡೆಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ೫೦ ರವರ ಮಾಹಿತಿಗಾಗಿ ಕಳುಹಿಸಿದೆ.
2. ಕಾರ್ಯಪಾಲಕ ಅಭಿಯಂತರರು, ಸಿ.ವಿ.ರಾಮನ್‌ನಗರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
3. ಮಾನ್ಯ ತಹಶೀಲ್ದಾರ್, ಕೆ.ಆರ್.ಪುರಂ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸುತ್ತಾ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
4. ಅಧೀಕ್ಷಕರು, ತೋಟಗಾರಿಕೆ ಇಲಾಖೆ(ಪೂರ್ವ) ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
5. ಆರೋಗ್ಯ ವೈದ್ಯಾಧಿಕಾರಿಗಳು(ಸಿ.ವಿ.ರಾಮನ್‌ನಗರ) ವಿಭಾಗ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
6. ಆರಕ್ಷಕ ನಿರೀಕ್ಷಕರು, ಕಾನೂನು ಸುವ್ಯವಸ್ಥೆ, ಬೈಯ್ಯಪ್ಪನಹಳ್ಳಿ/ರಾಮೂರ್ತಿನಗರ/ಜೀವನ್‌ಭಿಮಾನಗರ/ ಇಂದಿರಾನಗರ, ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
7. ಆರಕ್ಷಕ ನಿರೀಕ್ಷಕರು(ಸಂಚಾರ ಪೋಲೀಸ್ ಠಾಣೆ) ಬಾಣಸವಾಡಿ/ರಾಮೂರ್ತಿನಗರ/ಜೀವನ್‌ಭಿಮಾನಗರ/ ಇಂದಿರಾನಗರ, ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಿ.ವಿ.ರಾಮನ್‌ನಗರ ಉಪ ವಿಭಾಗ/ಕಾಮಗಾರಿ ಇಲಾಖೆ/ಘನತ್ಯಾಜ್ಯ ನಿರ್ವಹಣೆ/ವಿದ್ಯುತ್/ಬಿಡಬ್ಲ್ಯೂಎಸ್‌ಎಸ್‌ಬಿ/ಬೆಸ್ಕಾಂ/ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
9. ಸಹಾಯಕ ಕಂದಾಯ ಅಧಿಕಾರಿ, ಸಿ.ವಿ.ರಾಮನ್‌ನಗರ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
10. ಅರಣ್ಯಾಧಿಕಾರಿಗಳು, ಬಿ.ಬಿ.ಎಂ.ಪಿ ಅರಣ್ಯ ಇಲಾಖೆ, ಸಿ.ವಿ.ರಾಮನ್‌ನಗರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
11. ಕಂದಾಯ ಪರಿವೀಕ್ಷಕರು ಮತ್ತು ಕಂದಾಯ ವಸೂಲಿಗಾರರು, ವಾರ್ಡ್ ಸಂಖ್ಯೆ೫೦-ಬೆನ್ನಿಗಾನಹಳ್ಳಿ ರವರ ಮಾಹಿತಿಗಾಗಿ ಹಾಗೂ ಸಭೆಗೆ ಹಾಜರಾಗಲು ಕೋರಿದೆ
12. ವೈದ್ಯಾಧಿಕಾರಿಗಳು, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಹಳೇ ಬೈಯ್ಯಪ್ಪನಹಳ್ಳಿ ವಾರ್ಡ್ ಸಂಖ್ಯೆ೫೦-ಬೆನ್ನಿಗಾನಹಳ್ಳಿ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
13. ಹಿರಿಯ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ೫೦-ಬೆನ್ನಿಗಾನಹಳ್ಳಿ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
14. ಸ್ಥಳೀಯ ವಸತಿ ಕ್ಷೇಮಾಭಿವೃದ್ಧಿ ಸಂಘ(RWA) ರವರು ವಾರ್ಡ್ ಸಂಖ್ಯೆ೫೦-ಬೆನ್ನಿಗಾನಹಳ್ಳಿ ರವರ ಮಾಹಿತಿಗಾಗಿ ಹಾಗೂ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
15. ಕಛೇರಿ ಕಡತಕ್ಕೆ